# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 02.07.2026 ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2026ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

| | | |
|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 3. | ಪ್ರೊ. ಪುಟ್ಟಣ್ಣ ಕೆ.<br>ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 4. | ಡಾ.ಕೆ.ಸಿ. ಮಹದೇಶ | ಸದಸ್ಯರು |
| 5. | ಪ್ರೊ. ಉದಯ ಕುಮಾರ್ ಬಿ. | ಸದಸ್ಯರು |
| 6. | ಶ್ರೀ ನಿತ್ಯಾನಂದ ವಿ. ಗಾಂವಕರ | ಸದಸ್ಯರು |
| 7. | ಶ್ರೀಮತಿ ಶೃತಿ ಶೆಟ್ಟಿ | ಸದಸ್ಯರು |
| 8. | ಶ್ರೀ ಅಲೆಕ್ಸ್ ಐವನ್ ಸಿಕ್ವೇರಾ | ಸದಸ್ಯರು |
| 9. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು |
| 10. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು |
| 11. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು |
| 12. | ಶ್ರೀ ರಘುರಾಜ್ | ಸದಸ್ಯರು |
| 13. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು |
| 14. | ಡಾ. ಸಂದೇಶ್ ಕೆ.ಎಸ್<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |

| | | |
|---|---|---|
| 15. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>**(ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಆಯುಕ್ತರ ಪರವಾಗಿ)** | ಸದಸ್ಯರು |
| 16. | ಪ್ರೊ. ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 17. | ಶ್ರೀ ಪಂಚಲಿಂಗಸ್ವಾಮಿ, **ಕೆ.ಎಸ್.ಎ.ಎಸ್.,**<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು |
| 18. | ಡಾ. ಗಣೇಶ್ ಸಂಜೀವ್<br>ಪ್ರಭಾರ ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ |

**ಅನುಪಸ್ಥಿತರು:**

| | | |
|---|---|---|
| 1. | ತಾಂತ್ರಿಕ ಶಿಕ್ಷಣ ನಿರ್ದೇಶಕರು,<br>ಕರ್ನಾಟಕ ಸರ್ಕಾರ, ಬೆಂಗಳೂರು | ಸದಸ್ಯರು |
| 2. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು |
| 3. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಿಂಡಿಕೇಟಿನ ಚತುರ್ಥ ಸಾಮಾನ್ಯ ಸಭೆಗೆ ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸ್ವಾಗತಿಸಿದರು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.

**I. ಅನುಸರಣಾ ವರದಿಯ ಅನುಮೋದನೆ**

**ದಿನಾಂಕ 20.05.2026ರಂದು ನಡೆದ ಸಿಂಡಿಕೇಟಿನ 2026ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

**- ಅನುಮೋದಿಸಲಾಯಿತು -**

**II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಬ್ಬಂದಿ:ಸಾ.ಸ.4:1 (2026) |
| ವಿಷಯ: | ಡಾ. ರಾಜಶೇಖರ್ ಎನ್., ಸಹಾಯಕ ಪ್ರಾಧ್ಯಾಪಕರು, ಸಸ್ಯಶಾಸ್ತ್ರ ವಿಭಾಗ, ಇವರ ದೀರ್ಘಾವಧಿಯ ಗೈರು ಹಾಜರಿಯನ್ನು ಪರಿಗಣಿಸುವ ಬಗ್ಗೆ. |
| **ನಿರ್ಣಯ:** | ಡಾ. ರಾಜಶೇಖರ್‌ರವರಿಗೆ ದೀರ್ಘಾವಧಿ ರಜೆಯ ಸಂಬಳಕ್ಕೆ ಸರಕಾರಕ್ಕೆ ಪತ್ರ ಬರೆದು ಸ್ಪಷ್ಟೀಕರಣ ಕೋರುವುದು. ಹಾಗೆಯೇ ಸಿಂಡಿಕೇಟಿನ ನಿರ್ಣಯದಂತೆ ಅವರಿಗೆ HRMS ಮುಖಾಂತರ ಸಂಬಳ ನೀಡಲು ಕ್ರಮ ವಹಿಸುವುದು ಎಂದು ನಿರ್ಣಯಿಸಲಾಗಿದೆ. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.4:2(2026) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜಾಗಿರುವ ಮಣೇಲ್ ಶ್ರೀನಿವಾಸ್ ನಾಯಕ್ ಇನ್ಸ್ಟಿಟ್ಯೂಟ್ ಆಫ್ ಮೆನೇಜ್‌ಮೆಂಟ್, ಮಂಗಳೂರು ಎಂಬ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಸಲುವಾಗಿ ಸ್ಥಾಯಿ ಸಮಿತಿ ರಚಿಸುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. ಸ್ಥಾಯಿ ಸಮಿತಿಗೆ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ರಘುರಾಜ್ ಇವರನ್ನು ನೇಮಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.4:3(2026) |
| ವಿಷಯ: | ಅಭಿವೃದ್ಧಿ ಅನುದಾನದಡಿಯಲ್ಲಿ 1) ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಮಾನವಿಕ ವ್ಯಾಸಂಗ ಕಟ್ಟಡ ಹಿಂಭಾರದ ಓವರ್ ಹೆಡ್ ಟ್ಯಾಂಕ್ ಮತ್ತು ನೆಲ ಮಟ್ಟದ ಜಲಗಾರ ಅಗತ್ಯತೆಯ ನಿರ್ವಹಣೆ ಮತ್ತು ಸ್ಟ್ಯಾಂಡ್ ಬೈ ಪಂಪನ್ನು ಒದಗಿಸಿ ಅಳವಡಿಸುವುದು.<br>2) ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ವಿಜ್ಞಾನ ಸಂಕೀರ್ಣ ಕಟ್ಟಡದ ಸಂಪ್ ಟ್ಯಾಂಕಿಗೆ 3 HP ಸಾಮರ್ಥ್ಯದ ಸ್ಟ್ಯಾಂಡ್ ಬೈ ಪಂಪ್ ಹಾಗೂ ನೀರಿನ ಮಟ್ಟದ ನಿರ್ಬಂಧಕವನ್ನು 2 ಪಂಪ್‌ಗಳಿಗೂ ಪ್ರತ್ಯೇಕವಾಗಿ ಅಳವಡಿಸುವುದು.<br>3) ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಪೆವಿಲಿಯನ್‌ಗೆ ನೀರು ಸರಬರಾಜು ಸಂಪರ್ಕ ಕಲ್ಪಿಸುವ ಕಾಮಗಾರಿ - ಪ್ಯಾಕೇಜ್ ಟೆಂಡರ್ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಸಾ.ಸ.4:4(2026) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ವಿವಿಧ ಅಧ್ಯಯನ ಪೀಠಗಳ ಚಟುವಟಿಕೆಗಳಿಗೆ ಸಾಮಾನ್ಯ ಕಾರ್ಯವಿಧಾನ ಮಾನದಂಡ (SOP) - 2026ರ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ:ಸಾ.ಸ.4:5(2026) |
| ವಿಷಯ: | IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಎಪ್ರಿಲ್ / ಮೇ 2026ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ. |
| **ನಿರ್ಣಯ:** | ಅವಗಾಹಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಬ್ಬಂದಿ:ಸಾ.ಸ.4:6(2026) |
| ವಿಷಯ: | ದಿನಾಂಕ 04.08.2025ರಂದು ಪ್ರಕಟಿಸಲಾದ ಅಂತಿಮ ಜೇಷ್ಠತಾ ಪಟ್ಟಿಗಳ ಆಧಾರದಲ್ಲಿ ಭಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳಿಗೆ ಭಡ್ತಿ ನೀಡುವ ಪ್ರಸ್ತಾವನೆಗೆ ಅನುಮೋದನೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.4:7(2026) |
| ವಿಷಯ: | ಡಾ.ಕೆ.ಸಿ. ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1: | ಬಸವಣ್ಣ ಅಧ್ಯಯನ ಕೇಂದ್ರ ಮತ್ತು ವಿವೇಕಾನಂದ ಅಧ್ಯಯನ ಕೇಂದ್ರಗಳ ಸ್ಥಾಪನೆ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಪ್ರಸ್ತುತ ಅದರ ಸ್ಥಿತಿಗತಿ ಮತ್ತು Follow up ವಿಚಾರವಾಗಿ ಚರ್ಚಿಸಿ ನಿರ್ಣಯಿಸಲು ಕೋರಿದೆ. |
| **ನಿರ್ಣಯ:** | ಅಧ್ಯಯನ ಕೇಂದ್ರಗಳ ಸ್ಥಾಪನೆಯ ಬಗ್ಗೆ ಸಲ್ಲಿಸಿರುವ ಪ್ರಸ್ತಾವನೆಗಳ ಸ್ಥಿತಿಗತಿಯ ವಿವರವನ್ನು ನೀಡಲಾಯಿತು. ಮಾನ್ಯ ಸದಸ್ಯರು ಸರ್ಕಾರದ ಮಟ್ಟದಲ್ಲಿ ತಮ್ಮ ಪ್ರಯತ್ನವನ್ನು ಮುಂದುವರಿಸಿ ಸರ್ಕಾರದಿಂದ ಅನುಮೋದನೆಗೊಳ್ಳಲು ಸಹಕಾರ ನೀಡುವಂತೆ ಕೋರಲಾಯಿತು. |
| ವಿಷಯ 2 : | ಮಂಗಳೂರು ವಿಶ್ವವಿದ್ಯಾನಿಲಯದ ಆರ್ಥಿಕ ಪರಿಸ್ಥಿತಿಗಳನ್ನು ನಿರ್ವಹಿಸಲು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಜಾಗದಲ್ಲಿ ತೆಂಗಿನ ಮರಗಳು ಮತ್ತು ತೇಗದ ಮರಗಳನ್ನು ನೆಡುವ ಮೂಲಕ ಪರಿಸರ ಜಾಗೃತಿ ಮತ್ತು ಆರ್ಥಿಕ ಸಂಪತ್ತನ್ನು ವಿಶ್ವವಿದ್ಯಾನಿಲಯಕ್ಕೆ ತಂದುಕೊಡಲು ಈ ವಿಚಾರವಾಗಿ ಚರ್ಚಿಸಿ ನಿರ್ಣಯಿಸಲು ಕೋರಿದೆ. |
| **ನಿರ್ಣಯ:** | ಮಾನ್ಯ ಸಿಂಡಿಕೇಟ್ ಸದಸ್ಯರಾದ ಡಾ. ಕೆ.ಸಿ. ಮಹದೇಶ ಇವರು ನೀಡಿದ ಸಲಹೆಯನ್ನು ಎಲ್ಲಾ ಸಿಂಡಿಕೇಟು ಸದಸ್ಯರುಗಳು ಒಕ್ಕೊರಲಿನಿಂದ ಬೆಂಬಲಿಸಿದರು. ವಿಶ್ವವಿದ್ಯಾನಿಲಯದ ಆವರಣದಲ್ಲಿ ಹಣ್ಣಿನ ಗಿಡ, ತೆಂಗಿನ ಮತ್ತು ತೇಗದ ಸಸಿಗಳನ್ನು ನೆಟ್ಟು, ಸಂರಕ್ಷಿಸಲು ಅನುಕೂಲಕರವಾದ ಪ್ರದೇಶವನ್ನು ಗುರುತಿಸಲು ನಿರ್ಣಯಿಸಲಾಯಿತು. ಮಣ್ಣಿನ ಪರೀಕ್ಷೆಯ ಬಗ್ಗೆ ವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ವಿಭಾಗದ ಸಲಹೆಯನ್ನು ಪಡೆದು ಮುಂದಿನ ಕ್ರಮಕೈಗೊಳ್ಳಲು ತೀರ್ಮಾನಿಸಲಾಯಿತು.<br><br>ವಿಶ್ವವಿದ್ಯಾನಿಲಯದ ಆದಾಯ ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ ಎಲ್ಲಾ ಅಧ್ಯಾಪಕರು, ಆಡಳಿತ ಸಿಬ್ಬಂದಿಗಳು, ನಿವೃತ್ತರು, ಹಳೆ ವಿದ್ಯಾರ್ಥಿಗಳು ಹಾಗೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಸಂಶೋಧಕರು ಹಾಗೂ ವಿದ್ಯಾರ್ಥಿಗಳು ತಮ್ಮ ಹೆಸರಿನಲ್ಲಿ ಹಣ್ಣಿನ ಗಿಡಗಳು, ತೆಂಗು ಹಾಗೂ ತೇಗ ಮುಂತಾದವುಗಳನ್ನು ನೆಟ್ಟು ಬೆಳಸಲು ನೀತಿ ನಿಯಮಗಳನ್ನು ರೂಪಿಸಲು ನಿರ್ಣಯಿಸಲಾಯಿತು.<br><br>ಎಲ್ಲಾ ಸಿಂಡಿಕೇಟ್ ಸದಸ್ಯರೂ ತಮ್ಮ ಹೆಸರಿನಲ್ಲಿ ಗಿಡಗಳನ್ನು ಬೆಳಸುವ ಯೋಜನೆಗೆ ಸಹಾಯವನ್ನು ಒದಗಿಸುವುದಾಗಿ ತಿಳಿಸಿದರು. ಡಾ. ಕೆ.ಸಿ. ಮಹದೇಶರವರು ವಿಶ್ವವಿದ್ಯಾನಿಲಯದ ಈ ಯೋಜನೆಗೆ 50 ತೆಂಗಿನ ಸಸಿಗಳನ್ನು ನೀಡುವುದಾಗಿ ಭರವಸೆ ನೀಡಿದರು. |

ವಿಷಯ 3: ವಿಶ್ವವಿದ್ಯಾನಿಲಯದ Endowment Lecture ವಿಷಯವಾಗಿ ದತ್ತಿ ನಿಧಿ ನೀಡುವ ವಿಚಾರವಾಗಿ 3 ಲಕ್ಷದಿಂದ 5 ಲಕ್ಷ ಹಣವನ್ನು ಇಡುವ ವಿಚಾರವಾಗಿ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಠೇವಣಿಗೆ ಬಡ್ಡಿ ದರ ಕಡಿಮೆ ಇರುವ ಕಾರಣ ಮೂಲ ಧನ 5 ಲಕ್ಷವನ್ನೇ ಮುಂದುವರಿಸಲು ನಿರ್ಣಯಿಸಲಾಯಿತು.

ವಿಷಯ 4: ಮಂಗಳೂರು ವಿಶ್ವವಿದ್ಯಾನಿಲಯದ ಇಂಜಿನಿಯರಿಂಗ್ ಸೆಕ್ಷನ್‌ನ ಸಮಿತಿಯ ಅಧ್ಯಕ್ಷನಾಗಿ ನಾನು ತೆಗೆದುಕೊಂಡ ಕ್ರಮಗಳ (ಅಭಿವೃದ್ಧಿ ಯೋಜನೆಗಳ ಅನುಷ್ಠಾನ) ಬಗ್ಗೆ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಡಾ. ಕೆ.ಸಿ. ಮಹದೇಶರವರು ವಿಶ್ವವಿದ್ಯಾನಿಲಯದ ಅಭಿವೃದ್ಧಿಯ ಕುರಿತು ನೀಡಿರುವ ವರದಿಗೆ ಮಾನ್ಯ ಕುಲಪತಿಗಳು ಅಭಿನಂದಿಸಿದರು. ಅವರ ಅಲೋಚನೆಗಳನ್ನು ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಯೋಜನೆಗಳನ್ನು ತಯಾರಿಸಿ ಅನುದಾನ ಕ್ರೋಢೀಕರಣಕ್ಕೆ ಕ್ರಮವಹಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.4:8(2026)

ವಿಷಯ: ಡಾ.ಎಸ್.ಬಿ.ಎಂ. ಪ್ರಸನ್ನ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ನಿರ್ದೇಶಕರ ಖಾತೆಯಿಂದ ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ ರವರ ವೈಯುಕ್ತಿಕ ಬ್ಯಾಂಕ್ ಖಾತೆಗೆ ಹಲವು ಬಾರಿ ಹಣ ವರ್ಗಾವಣೆಯಾಗಿದೆ ಎಂದು ಹಲವು ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ಆರೋಪ ಬಂದಿರುವ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ಹಾಗೂ ಮಾನ್ಯ ಲೋಕಾಯುಕ್ತ, ಮಂಗಳೂರು ಕಛೇರಿಗೆ ಆರ್.ಟಿ.ಐ., ಕಾರ್ಯಕರ್ತರೊಬ್ಬರು ದೂರು ನೀಡಿರುವ ಬಗ್ಗೆ ಪತ್ರಿಕಾ ವರದಿಗಳನ್ನು ವಿಶ್ವವಿದ್ಯಾನಿಲಯವು ಗಮನಿಸಿಯೂ ಸಿಂಡಿಕೇಟ್ ಸಭೆಯ ಗಮನಕ್ಕೆ ತರದೆ ಇರುವುದು ಖಂಡನೀಯ. ಹಾಗಾಗಿ, ಸಿಂಡಿಕೇಟ್ ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರವನ್ನು ಕೈಗೊಳ್ಳಬೇಕಾಗಿರುವುದರಿಂದ ಅವರ ಬಗ್ಗೆ ಇರುವ ಆರೋಪಗಳ ಬಗ್ಗೆ ಸಭೆಗೆ ಪೂರ್ಣ ವರದಿಯನ್ನು ನೀಡಿ, ಚರ್ಚಿಸಿ, ಸಭೆಯ ಮುಂದೆ ಮಂಡಿಸುವುದು.

**ನಿರ್ಣಯ:** ಸದಸ್ಯರು ಸಭೆಗೆ ಗೈರುಹಾಜರಾಗಿರುವುದರಿಂದ ಕಾರ್ಯಸೂಚಿಯನ್ನು ಕೈಬಿಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.4:9(2026)

ವಿಷಯ: ಶ್ರೀ ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಆರೋಗ್ಯ ಕೇಂದ್ರದಲ್ಲಿ ಆರೋಗ್ಯಾಧಿಕಾರಿ (ವೈದ್ಯರು) ಇಲ್ಲದಿರುವುದರಿಂದ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ, ಸಿಬ್ಬಂದಿಗಳಿಗೆ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಹಿಂದುಳಿದ ವರ್ಗಗಳ, ಅಲ್ಪಸಂಖ್ಯಾತರ ಹಾಸ್ಟೆಲ್‌ಗಳ ವಿದ್ಯಾರ್ಥಿ ವಿದ್ಯಾರ್ಥಿನಿಯರುಗಳಿಗೆ ಬಹಳಷ್ಟು ತೊಂದರೆಗಳಾಗುವುದರಿಂದ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಆರೋಗ್ಯ ಕೇಂದ್ರವನ್ನು ಗ್ರಾಮೀಣ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮಾಡಿಸಿ ಕೊಣಾಜೆ ಗ್ರಾಮದ ಬಡವರಿಗೂ ಅನುಕೂಲವಾಗುವಂತೆ ಈ ಕೇಂದ್ರಕ್ಕೆ ತಾತ್ಕಾಲಿಕ ಅಥವಾ ಗುತ್ತಿಗೆ ಆಧಾರದಲ್ಲಿ ವೈದ್ಯರನ್ನು ನೇಮಿಸಿ ಔಷಧಿಗಳನ್ನು ಒದಗಿಸಲು ನಮ್ಮ ಕ್ಷೇತ್ರದ ಶಾಸಕರು, ಕರ್ನಾಟಕ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಗೆ ಮನವಿ ಸಲ್ಲಿಸಿ ವಿನಂತಿಸುವ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ಸ್ಥಳೀಯ ನಿವಾಸಿಗಳ ಉಪಯೋಗಕ್ಕಾಗಿ ಆರೋಗ್ಯ ಕೇಂದ್ರಕ್ಕೆ ಸರ್ಕಾರದ ವತಿಯಿಂದ ವೈದ್ಯರ ಸೇವೆಯನ್ನು ನೀಡುವಂತೆ ಸ್ಥಳೀಯ ಶಾಸಕರು ಹಾಗೂ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಗೆ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ಸಾ.ಸ.4:10(2026)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಹೊಸ ಕಾರ್ಯಕ್ರಮಗಳು / ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ / ಕಾರ್ಯಕ್ರಮ ಮುಚ್ಚುವಿಕೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.4:11(2026)

ವಿಷಯ: ಡಿಸೆಂಬರ್ - 2025, ಜನವರಿ 2026 ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪದವಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳ - ದಂಡನೆಯನ್ನು ದೃಢಪಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.4:12(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2026-27ನೇ ಸಾಲಿನ ಪದವಿ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.4:13(2026)

ವಿಷಯ: ಶೈಕ್ಷಣಿಕ ವರ್ಷ 2026-27 ನೇ ಸಾಲಿನಲ್ಲಿ ಕೆನರಾ ಕಾಲೇಜು (ಸ್ವಾಯತ್ತ), ಮಂಗಳೂರು ವಿದ್ಯಾಸಂಸ್ಥೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಹೊಸ ಕಾರ್ಯಕ್ರಮಗಳಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರೆ ವಿಷಯಗಳು:**

1. ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಈ ಸಾಲಿನಿಂದ ಸ್ನಾತಕೋತ್ತರ ಎಂ.ಕಾಂ. ಪ್ರವೇಶಾತಿಯನ್ನು ನಿಲುಗಡೆಗೊಳಿಸಿರುವ ಬಗ್ಗೆ ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ರಘುರಾಜ್ ಹಾಗೂ ಡಾ. ಕೆ.ಸಿ. ಮಹದೇಶ ಇವರು ಆಕ್ಷೇಪಿಸಿ, ವಿದ್ಯಾರ್ಥಿಗಳ ಬೇಡಿಕೆ ಇರುವ ಕಾರ್ಯಕ್ರಮಗಳನ್ನು ವಿಶ್ವವಿದ್ಯಾನಿಲಯ ಕಾಲೇಜಿನಲ್ಲಿ ಯಾವುದೇ ಕಾರಣಕ್ಕೂ ನಿಲುಗಡೆಗೊಳಿಸಬಾರದು ಎಂಬುದಾಗಿ ಒತ್ತಾಯಿಸಿದರು. ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರಕ್ಕೆ ಈ ಹಿಂದೆ ಸಲ್ಲಿಸಲಾಗಿದ್ದ ಪರಿನಿಯಮಗಳ ಅನುಮೋದನೆ ದೊರೆತಿಲ್ಲದೇ ಇರುವುದರಿಂದ ಹಾಗೂ ವಿಶ್ವವಿದ್ಯಾನಿಲಯದ ಆವರಣದಲ್ಲಿ ಅದೇ ಕಾರ್ಯಕ್ರಮವು ಖಾಯಂ ಪ್ರಾಧ್ಯಾಪಕರುಗಳೊಂದಿಗೆ ನಡೆಯುತ್ತಿರುವುದರಿಂದ ಆರ್ಥಿಕ ಮಿತವ್ಯಯದ ದೃಷ್ಟಿಯಿಂದ ಅನ್ಯಮಾರ್ಗವಿಲ್ಲದೆ ನಿಲುಗಡೆಗೊಳಿಸಬೇಕಾಗಿರುವ ಬಗ್ಗೆ ಸಭೆಗೆ ತಿಳಿಸಲಾಯಿತು. ಈ ಕುರಿತು ವಿಶ್ವವಿದ್ಯಾನಿಲಯ ಕಾಲೇಜಿನಲ್ಲಿ ಸ್ನಾತಕೋತ್ತರ ವಿಭಾಗಗಳ ಸ್ಥಾಪನೆಯ ಕುರಿತು ಸರ್ಕಾರದ ಅನುಮೋದನೆಗೆ

ಸಲ್ಲಿಸಲಾಗಿರುವ ಪರಿನಿಯಮದ ಪ್ರತಿಗಳನ್ನು ನೀಡಿದಲ್ಲಿ ಸರ್ಕಾರದ ನಾಮನಿರ್ದೇಶಿತ ಸದಸ್ಯರು ಸರ್ಕಾರದ ಮಟ್ಟದಲ್ಲಿ ಪ್ರಭಾವ ಬೀರಿ ಅನುಮೋದನೆಗೆ ಸಹಾಯ ಮಾಡುವುದಾಗಿ ತಿಳಿಸಿದರು. ಈ ಬಗ್ಗೆ ಸರ್ಕಾರಕ್ಕೆ ಸಲ್ಲಿಸಲಾಗಿರುವ ಪರಿನಿಯಮಗಳ ಪ್ರತಿಯನ್ನು ಸರ್ಕಾರದ ನಾಮನಿರ್ದೇಶಿತ ಸದಸ್ಯರಿಗೆ ನೀಡಲು ನಿರ್ಣಯಿಸಲಾಯಿತು.

2. ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ನವಮಂಗಳೂರು ಬಂದರು ಪ್ರಾಧಿಕಾರಕ್ಕೆ ಹಾಗೂ ಸ್ಥಿತಿವಂತ ಹಳೆ ವಿದ್ಯಾರ್ಥಿಗಳ ನೆರವು ಪಡೆಯುವ ನಿಟ್ಟಿನಲ್ಲಿ ಕನಿಷ್ಠ 5 ಬಸ್ ಗಳನ್ನು ನೀಡುವಂತೆ ಮನವಿ ಸಲ್ಲಿಸಬೇಕೆಂದು ಮಾನ್ಯ ಸಿಂಡಿಕೇಟ್ ಸದಸ್ಯರಾದ ಡಾ. ಕೆ.ಸಿ. ಮಹದೇಶ ಇವರು ನೀಡಿದ ಸಲಹೆಯಂತೆ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು.

3. ವಿದ್ಯಾರ್ಥಿಗಳ ಪ್ರತಿಭಟನೆಗೆ ಸಂಬಂಧಿಸಿ, ವಸ್ತುಸ್ಥಿತಿಯನ್ನು ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರಿಗೆ ಮನದಟ್ಟುಮಾಡುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯದ ವತಿಯಿಂದ ಪತ್ರಿಕಾ ಪ್ರಕಟಣೆಯನ್ನು ನೀಡುವಂತೆ ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ರಘುರಾಜ್ ರವರು ನೀಡಿದ ಸಲಹೆಯನ್ನು ಪರಿಗಣಿಸಲು ನಿರ್ಣಯಿಸಲಾಯಿತು.

4. ವಿಶ್ವವಿದ್ಯಾನಿಲಯದ ಮಾನ್ಯ ಸಿಂಡಿಕೇಟ್ ಸದಸ್ಯರು ವಿದ್ಯಾರ್ಥಿಗಳ ತುರ್ತು ಸಮಸ್ಯೆಗಳ ಬಗ್ಗೆ ಪರೀಕ್ಷಾಂಗ ವಿಭಾಗದ ಅಧಿಕಾರಿಗಳ ಗಮನಕ್ಕೆ ತಂದಾಗ, ಕಾಳಜಿ ವಹಿಸಿ ಆದ್ಯತೆಯಲ್ಲಿ ಪರಿಹರಿಸಬೇಕೆಂದು ಸೂಚಿಸಲಾಯಿತು.

5. ಗೌರವಾನ್ವಿತ ಕುಲಾಧಿಪತಿಗಳಿಂದ ನಾಮನಿರ್ದೇಶನಗೊಂಡು ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮೂರು ವರ್ಷಗಳ ಅವಧಿಯನ್ನು ದಿನಾಂಕ 05.07.2026 ರಂದು ಪೂರೈಸುತ್ತಿರುವ ಡಾ. ಎಸ್.ಬಿ.ಎಂ. ಪ್ರಸನ್ನ ಹಾಗೂ ಡಾ. ಕೆ.ಸಿ. ಮಹದೇಶರವರವರ ಸೇವೆಯನ್ನು ಶ್ಲಾಘಿಸಿ ಅಭಿನಂದಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |